<u>ಸಾಕ್ಷಿಯನ್ನು ದಿಃ 01.10.2021 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

**<u>ಮುಂದುವರೆದ ಪಾಟೀ ಸವಾಲು ಪ್ರತಿವಾದಿಗಳ ಪರ ಶ್ರೀ ಎಸ್ ಜೆ ವಕೀಲರಿಂದಃ</u>**

ಚನ್ನಪ್ಪ ಹಾಗೂ ಆತನ ಸಹೋದರರು 1965 ರಲ್ಲಿ ವಿಭಾಗ ಮಾಡಿಕೊಂಡಿದ್ದರು ಎಂದು ನೀವು ಹೇಳಿದ್ದು ಆ ಬಗ್ಗೆ ದಾಖಲೆ ಇದೆಯೇ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿ ಇದೆ ಎಂದು ಉತ್ತರಿಸುತ್ತಾರೆ. ಆ ಬಗ್ಗೆ ಯಾವ ದಾಖಲೆ ಇದೆ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿ ವಿಭಾಗ ಪತ್ರ ಇದೆ ಎಂದು ಉತ್ತರಿಸುತ್ತಾರೆ. ಆ ದಾಖಲೆಯನ್ನು ನಾನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದೇನೆ.

ಸದರಿ ವಿಭಾಗದಲ್ಲಿ ದಾವಾಸ್ತಿ ಚನ್ನಪ್ಪನ ಪಾಲಿಗೆ ಬಂದಿತ್ತು ಎಂದುಹೇಳಲು ಯಾವ ದಾಖಲೆ ಇದೆ ಎಂದು ಕೇಳಿದ ಪ್ರಶ್ನೆಗೆ ಸಾಕ್ಷಿ ವಿಭಾಗ ಪತ್ರವಿದೆ ಎಂದು ಉತ್ತರಿಸುತ್ತಾರೆ. ಆ ವಿಭಾಗ ಪತ್ರವನ್ನು ನಾನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದೇನೆ ದಿಃ31.08.2005 ರಂದು 1 ರಿಂದ 5 ನೇ ಪ್ರತಿವಾದಿಗಳು ನನ್ನ ವಿರುದ್ಧ ಇದೇ ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಒಂದು ದಾವೆ ಹೂಡಿದ್ದರು ಎಂದರೆ ಸಾಕ್ಷಿ ಇದೇ ಬೇರೆ, ಅದೇ ಬೇರೆ ಎಂದು ಉತ್ತರಿಸುತ್ತಾರೆ. ಆ ದಾವೆಯನ್ನು ಯಾವ ಸ್ವತ್ತಿಗೆ ಸಂಬಂಧಿಸಿದಂತೆ ಹೂಡಿದ್ದರು ಎಂದು ಕೇಳಿದಪ್ರಶ್ನೆಗೆ ಸಾಕ್ಷಿ ಅದು ತನಗೆ ನೆನಪಿಲ್ಲ ಎಂದು ಉತ್ತರಿಸುತ್ತಾರೆ.

ತಾವೇ ಸ್ವತ್ತಿನ ಮಾಲೀಕರು ಎಂದು ಈ ದಾವೆಯ 1 ರಿಂದ 5 ನೇ ಪ್ರತಿವಾದಿಗಳು ಆ ದಾವೆಯನ್ನು ಹೂಡಿದ್ದರು ಎಂದರೆ ಸರಿಯಲ್ಲ. ಪ್ರಸ್ತುತ ದಾವೆಯ ದಾವಾಸ್ತಿಗೆ ಸಂಬಂಧಿಸಿದಂತೆ 1 ರಿಂದ 5 ನೇ ಪ್ರತಿವಾದಿಗಳು ನನ್ನ ವಿರುದ್ಧ ಓಎಸ್ ನಂ.104/2005 ರ ದಾವೆಯನ್ನು ಹೂಡಿದ್ದರು ಎಂದರೆ ಸರಿಯಲ್ಲ. ಸದರಿ ದಾವೆಯಲ್ಲಿ ನಾನು ಏನೆಂದು ನನ್ನ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದೆ ಎನ್ನುವುದು ನನಗೆ ನೆನಪಿಲ್ಲ.

ಪ್ರತಿವಾದಿಗಳ ಪೂರ್ವಜ ಸಿದ್ದವೀರಪ್ಪ ಬಿನ್ ನಂಜಪ್ಪ ಹಾಗೂ ಚನ್ನಪ್ಪನವರಿಂದ ದಾವಾ ಸರ್ವೆ ನಂಬರಿನಲ್ಲಿ 15 ಎಕರೆ ಜಮೀನನ್ನು ಖರೀದಿಸಿದ್ದರು ಎಂದರೆ ಸಾಕ್ಷಿ ಅದು ತನಗೆ ಗೊತ್ತಿಲ್ಲ ಎಂದು ಉತ್ತರಿಸುತ್ತಾರೆ. ನಮ್ಮ ಸ್ವತ್ತಿಗೆ ಪ್ರತಿವಾದಿಗಳು ತೊಂದರೆ ಕೊಡುತ್ತಿದ್ದಾರೆ ಎಂದು ನಾವು ಈ ದಾವೆಯನ್ನು ಹೂಡಿದ್ದಾರೆ. ಈ ದಾವೆಯ ವಾದ ಪತ್ರದಲ್ಲಿ ಏನು ಬರೆಸಿ ಹಾಕಿದ್ದೇವೆ ಎನ್ನುವುದು ನನಗೆ ನೆನಪಿಲ್ಲ. ನಾವು ಸಲ್ಲಿಸಿದ ದಾವೆಗೆ ಪ್ರತಿವಾದಿಗಳು ಏನೆಂದು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದಾರೆ ಎನ್ನುವುದನ್ನು ನಾನು ತಿಳಿದುಕೊಂಡಿದ್ದೇನೆ. ಸಾಕ್ಷಿ ಮುಂದುವರೆದು ಈಗ ಅದು ತನಗೆ ನೆನಪಾಗುತ್ತಿಲ್ಲ ಎಂದು ಉತ್ತರಿಸುತ್ತಾರೆ.

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದ ವಿಚಾರಗಳನ್ನು ನಾನು ತಿಳಿದುಕೊಂಡಿದ್ದೇನೆ. ದಾವಾಸ್ತಿಯಲ್ಲಿ ನಮಗೆ ಯಾವುದೇ ರೀತಿಯ ಹಕ್ಕು ಸ್ವಾಧೀನತೆ ಇಲ್ಲ ಎಂದರೆ ಸರಿಯಲ್ಲ. 1 ರಿಂದ 5 ನೇ ಪ್ರತಿವಾದಿಗಳೇ ದಾವಾಸ್ತಿಯ ಸಂಪೂರ್ಣ ಹಕ್ಕು ಸ್ವಾಧೀನತೆಯಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಸೇರಿದ ದಾವಾಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ನಾವು ಈ ಸುಳ್ಳು ದಾವೆ ಹುಡಿದ್ದೇವೆ ಎಂದರೆ ಸರಿಯಲ್ಲ.

(ಈ ಹಂತದಲ್ಲಿ ಸಾಕ್ಷಿಯ ಪಾಟೀ ಸವಾಲಿಗೆ ವಾದಿಗಳ ಪರ ವಕೀಲರು ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಿತು).

ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಹಿರಿಯೂರು.